# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **901** (೯೦೧) |
| ಉತ್ತರಿಸಬೇಕಾದ ದಿನಾಂಕ | : | 10.03.2021 |
| ಉತ್ತರಿಸಬೇಕಾದ ಸಚಿವರು | : | ವಸತಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಯೋಜನೆಗಳ ಮೂಲಕ ಬಡವರಿಗೆ ಮನೆಗಳನ್ನು ಹಂಚುವ ಕಾರ್ಯಕ್ರಮ ರೂಪಿಸಲಾಗಿದೆ; (ವಿವರ ನೀಡುವುದು) | ರಾಜ್ಯದಲ್ಲಿ ಈ ಕೆಳಕಂಡ ಯೋಜನೆಗಳ ಮೂಲಕ ಬಡವರಿಗೆ ಮನೆಗಳನ್ನು ಹಂಚುವ ಕಾರ್ಯಕ್ರಮ ವನ್ನು ರೂಪಿಸಲಾಗಿದೆ.<br><br>**ಕೇಂದ್ರ ಪುರಸ್ಕೃತ ಯೋಜನೆಗಳು:**<br>• ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ ಮತ್ತು ನಗರ)<br><br>**ರಾಜ್ಯ ಪುರಸ್ಕೃತ ಯೋಜನೆಗಳು:**<br>• ಬಸವ ವಸತಿ ಯೋಜನೆ<br>• ಡಾ. ಬಿ.ಆರ್. ಅಂಬೇಡ್ಕರ್ ವಸತಿ ಯೋಜನೆ (ಗ್ರಾಮೀಣ ಮತ್ತು ನಗರ)<br>• ದೇವರಾಜು ಅರಸು ವಸತಿ ಯೋಜನೆ (ಗ್ರಾಮೀಣ & ನಗರ)<br>• ವಾಜಪೇಯಿ ನಗರ ವಸತಿ ಯೋಜನೆ |
| ಆ) | ಕಳೆದ ಎರಡು ವರ್ಷಗಳಿಂದ ನಿರ್ಮಾಣವಾಗದೇ ಉಳಿದಿರುವ ಮನೆಗಳನ್ನು ಪೂರ್ಣಗೊಳಿಸಲು ಸರ್ಕಾರ ಅಂತಿಮ ಗಡುವು ನಿಗದಿಪಡಿಸಿದೆಯೇ; | ಸರ್ಕಾರದ "ಮನೆ" ಮಾರ್ಗಸೂಚಿಯನ್ವಯ ನಿಗಮದಿಂದ ಕಾಮಗಾರಿ ಆದೇಶ ನೀಡಿದ 90 ದಿನಗಳೊಳಗಾಗಿ ಫಲಾನುಭವಿಯು ಮನೆಯ ಕಾಮಗಾರಿಯನ್ನು ಪ್ರಾರಂಭಿಸಬೇಕಿದ್ದು, ಒಂದು ವರ್ಷದೊಳಗಾಗಿ ಮನೆಯನ್ನು ಪೂರ್ಣಗೊಳಿಸ ಬೇಕಾಗಿರುತ್ತದೆ.<br><br>ನಿಗದಿತ ಸಮಯದಲ್ಲಿ ಕಾಮಗಾರಿಯನ್ನು ಪ್ರಾರಂಭಮಾಡಿಕೊಳ್ಳದ ಮನೆಗಳನ್ನು ಮನೆ ಮಾರ್ಗಸೂಚಿಗಳನ್ವಯ ಬ್ಲಾಕ್ ಮಾಡಲಾಗಿತ್ತು.<br><br>ಜನ ಪ್ರತಿನಿದಿಗಳ ಕೋರಿಕೆಯಂತೆ ಸರಕಾರವು ದಿನಾಂಕ: 14.02.2020 ರಂದು ಆದೇಶ ಹೊರಡಿಸಿ ವಿವಿಧ ವಸತಿ ಯೋಜನೆಗಳಡಿ ನಿಗದಿತ ಸಮಯದಲ್ಲಿ ಪ್ರಾರಂಭಗೊಳ್ಳದೇ ಬ್ಲಾಕ್ ಆಗಿದ್ದ ಮನೆಗಳನ್ನು ತೆರವುಗೊಳಿಸಿ, ವಾಸ್ತವವಾಗಿ ಪ್ರಾರಂಭವಾಗಿರುವ ಮನೆಗಳ ಛಾಯಾಚಿತ್ರಗಳನ್ನು ಜಿಪಿಎಸ್ ಗೆ ಅಳವಡಿಸಲು ಒಂದೂವರೆ ತಿಂಗಳ ಕಾಲಾವಕಾಶವನ್ನು ನೀಡಲಾಗಿತ್ತು. ಈ ಅವಧಿಯಲ್ಲಿ ಜಿ.ಪಿ.ಎಸ್. ಮಾಡಿರುವ ಫಲಾನುಭವಿಗಳನ್ನು ಪ್ರಗತಿಗೆ ಪರಿಗಣಿಸಿ ಉಳಿದ ಎಲ್ಲಾ ಮನೆಗಳನ್ನು ಸರ್ಕಾರದ ಆದೇಶ ಸಂಖ್ಯೆ: ವಇ 12 ಹೆಚ್ಎಹೆಚ್ 2020, ದಿನಾಂಕ:19.05.2020 ರನ್ವಯ ರದ್ದುಪಡಿಸಲಾಗಿದೆ. |

| ಕ್ರ.ಸಂ | ಪ್ರಶ್ನೆ | ಉತ್ತರ |
| --- | --- | --- |
| ಇ) | ವಸತಿ ಇಲಾಖೆಯಡಿ ನಿರ್ಮಾಣವಾಗುವ ಮನೆಗಳ ಗುಣಮಟ್ಟದ ಕುರಿತು ಪ್ರಶ್ನೆಗಳು ಎದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮೇಲ್ಕಂಡ ವಸತಿ ಯೋಜನೆಗಳಡಿಯಲ್ಲಿ ಸ್ವತಃ ಫಲಾನುಭವಿಗಳೇ ಮನೆಗಳನ್ನು ನಿರ್ಮಾಣ ಮಾಡಿಕೊಳ್ಳುವುದರಿಂದ ಮನೆಗಳ ಗುಣಮಟ್ಟದ ಕುರಿತಂತೆ ಪ್ರಶ್ನೆ ಉದ್ಭವಿಸುವುದಿಲ್ಲ.<br><br>ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ, ಟೆಂಡರ್ ನಿಯಮಾವಳಿ ಪ್ರಕಾರ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು. |
| ಈ) | ಕಳಪೆ ಗುಣಮಟ್ಟದ ಮನೆಗಳನ್ನು ನಿರ್ಮಿಸಿದರೆ ಸಂಬಂಧಪಟ್ಟ ಗುತ್ತಿಗೆದಾರನ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ? | |

ಸಂಖ್ಯೆ :ವಇ 96 ಹೆಚ್‌ಎಹೆಚ್ 2021

(ವಿ. ಸೋಮಣ್ಣ)
ವಸತಿ ಸಚಿವರು